ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಶಾಸಕರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 01/08/2019

1/8/19

# ಶಾಸಕರ ಅನರ್ಹತೆ: ಕಾಂಗ್ರೆಸ್‌ನಿಂದ ಕೇವಿಯೇಟ್ ಸಲ್ಲಿಕೆ

ಬೆಂಗಳೂರು: ಅನರ್ಹತೆಗೆ ಒಳಗಾಗಿರುವ ಕಾಂಗ್ರೆಸ್‌ನ ಶಾಸಕರು ಸ್ಪೀಕರ್ ಆದೇಶದ ಹಿನ್ನೆಲೆಯಲ್ಲಿ ಕೆಪಿಸಿಸಿ ಅಧ್ಯಕ್ಷರು ಕೇವಿಯೇಟ್ ಅರ್ಜಿಯನ್ನು ಹೈಕೋರ್ಟ್‌ಗೆ ಸಲ್ಲಿಸಿದ್ದಾರೆ.

ಪಕ್ಷಾಂತರ ನಿಷೇಧ ಕಾಯಿದೆ ಅನ್ವಯ ಸ್ಪೀಕರ್ ಅವರು ಎಂಟು ಮಂದಿ ಶಾಸಕರನ್ನು ಅನರ್ಹತೆಗೊಳಿಸಿದ್ದಾರೆ. ಇದನ್ನು ಪ್ರಶ್ನಿಸಿ ಕೋರ್ಟ್‌ಗೆ ಬಂದಲ್ಲಿ ಯಾವುದೇ ಮಧ್ಯಂತರ ಆದೇಶ ನೀಡುವ ಮುನ್ನ ತಮ್ಮ ವಾದವನ್ನು ಪರಿಗಣಿಸಬೇಕು ಎಂಬ ಒಕ್ಕೊಣೆಯುಳ್ಳ ಕೇವಿಯೇಟ್‌ನ್ನು ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಅವರು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ.

ನಮ್ಮ ವಾದ ಆಲಿಸದೆ ಏಕಪಕ್ಷೀಯವಾಗಿ ಆದೇಶ ಮಾಡಿದರೆ ನಮಗೆ ಅನಾನುಕೂಲ ಆಗಲಿದೆ ಎಂದು ಅರ್ಜಿಯಲ್ಲಿ ನಮೂದಿಸಲಾಗಿದೆ. ಅನರ್ಹತೆ ಒಳಗಾಗಿರುವ ಶಾಸಕರು ಸ್ಪೀಕರ್ ಆದೇಶವನ್ನು ಪ್ರಶ್ನಿಸಿ ಕೋರ್ಟ್‌ನಿಂದ ತಡೆ ಕೋರುವ ಸುಳಿವು ಅರಿತು ಕೆಪಿಸಿಸಿ ಈ ಮುನ್ನೆಚ್ಚರಿಕೆಯನ್ನು ಕೈಗೊಂಡಿದೆ.

ಅನರ್ಹತೆಗೆ ಒಳಗಾದ ಶಾಸಕರಾದ ಬಿ.ಸಿ.ಪಾಟೀಲ್, ಪ್ರತಾಪ್ ಗೌಡ ಪಾಟೀಲ್, ಶಿವರಾಮ್ ಹೆಬ್ಬಾರ್, ಎಸ್.ಟಿ.ಸೋಮಶೇಕರ್, ಮುನಿರತ್ನ, ಭೈರತಿ ಬಸವರಾಜು, ರೋಷನ್ ಬೇಗ್ ಹಾಗೂ ಆನಂದ್ ಸಿಂಗ್ ಅವರನ್ನು ಕಾಂಗ್ರೆಸ್ ಪ್ರತಿವಾದಿಗಳನ್ನಾಗಿಸಿದೆ.